232

158ನೇ ಮುಂ

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ. ಹೇಮಲತಾ ನಾಯಕ್ ಇವರ ನಿಯಮ-72 ಗಮನ ಸೆಳೆಯುವ ಸೂಚನೆಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖಾ ಸಚಿವರ ಉತ್ತರ:-**

**ಸೂಚನೆ:-**

ರಾಜ್ಯದಲ್ಲಿ ಗ್ರಾಹಕರ ಹಕ್ಕುಗಳನ್ನು ರಕ್ಷಿಸುವುದು ಹಾಗೂ ಗ್ರಾಹಕರಿಗೆ ತ್ವರಿತ ನ್ಯಾಯ ಒದಗಿಸುವ ಉದ್ದೇಶದಿಂದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಗಳು ಕಾರ್ಯನಿರ್ವಹಿಸುತ್ತಿವೆ. ಆದರೆ ಹೊಸದಾಗಿ ರಚನೆಯಾದ ವಿಜಯನಗರ ಜಿಲ್ಲೆಯಲ್ಲಿ ಇನ್ನೂ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕಚೇರಿ ಸ್ಥಾಪನೆಯಾಗಿಲ್ಲ ಎಂಬುದು ಗಮನಾರ್ಹ ವಿಷಯವಾಗಿದೆ.

ವಿಜಯನಗರ ಜಿಲ್ಲೆ ರಚನೆಯಾಗಿ ಈಗಾಗಲೇ ಸಾಕಷ್ಟು ಕಾಲ ಕಳೆದಿದ್ದರೂ, ಅಲ್ಲಿನ ಗ್ರಾಹಕರು ತಮ್ಮ ವ್ಯಾಜ್ಯಗಳ ಪರಿಹಾರಕ್ಕಾಗಿ ಬಳ್ಳಾರಿ ಜಿಲ್ಲೆಯ ಆಯೋಗವನ್ನು ಅವಲಂಬಿಸಬೇಕಾದ ಪರಿಸ್ಥಿತಿ ಉಂಟಾಗಿದೆ. ಇದರಿಂದಾಗಿ ಜಿಲ್ಲೆಯ ಗ್ರಾಹಕರು ದೂರದ ಪ್ರಯಾಣ ಮಾಡಬೇಕಾಗಿ ಬರುತ್ತಿದ್ದು, ಸಮಯ ಹಾಗೂ ಹಣದ ವ್ಯಯವೂ ಹೆಚ್ಚಾಗಿದೆ. ಇದರ ಪರಿಣಾಮವಾಗಿ ಗ್ರಾಹಕರಿಗೆ ತ್ವರಿತ ಮತ್ತು ಸುಲಭ ನ್ಯಾಯ ದೊರೆಯುವ ಉದ್ದೇಶವೇ ಕುಂಠಿತವಾಗುತ್ತಿದೆ.

ಈ ಹಿನ್ನೆಲೆಯಲ್ಲಿ, ಹೊಸದಾಗಿ ರಚನೆಯಾದ ವಿಜಯನಗರ (ಹೊಸಪೇಟೆ) ಜಿಲ್ಲೆಯಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕಚೇರಿ ಸ್ಥಾಪನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಈ ಕುರಿತು ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ? ಪ್ರಸ್ತಾವನೆ ಸಲ್ಲಿಕೆಯಾಗಿದ್ದಲ್ಲಿ, ಸದರಿ ಕಛೇರಿಯ ಸ್ಥಾಪನೆಗೆ ಹಾಗೂ ಅಗತ್ಯ ಹುದ್ದೆಗಳ ಮಂಜೂರಾತಿಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

ಗ್ರಾಹಕರಿಗೆ ಸಮೀಪದಲ್ಲೇ ನ್ಯಾಯ ಒದಗಿಸುವ ದೃಷ್ಟಿಯಿಂದ ಈ ವಿಷಯ ಅತ್ಯಂತ ತುರ್ತು ಹಾಗೂ ಜನಜೀವನಕ್ಕೆ ಸಂಬಂಧಿಸಿದ್ದಾಗಿರುವುದರಿಂದ ಸರ್ಕಾರದ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:-**

ರಾಜ್ಯ ಸರ್ಕಾರವು ಬಳ್ಳಾರಿ ಜಿಲ್ಲೆಯಲ್ಲಿನ ಕೆಲವು ತಾಲ್ಲೂಕುಗಳನ್ನು ವಿಭಜಿಸಿ ವಿಜಯನಗರ ಜಿಲ್ಲೆಯನ್ನು ಸ್ಥಾಪಿಸಿರುವುದರಿಂದ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1) ರಡಿ ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿಯೂ ಸಹ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸ ಬೇಕಾಗಿರುವುದರಿಂದ, ಸರ್ಕಾರದ ಆದೇಶ ಸಂಖ್ಯೆ: ಆನಾಪ 79 ಸಲಫ 2023 (1204274) ದಿನಾಂಕ: 25.05.2026 ರಲ್ಲಿ ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1) ರಡಿ ವಿಜಯನಗರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸಿ, ಒಟ್ಟು 13 ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ)

**ಸಂಖ್ಯೆ: ಇ-ಆನಾಪ 32 ಸಲಫ 2026**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು.

ಕೆ.ಹೆಚ್. ಮುನಿಯಪ್ಪ
ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ
ವ್ಯವಹಾರಗಳ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:**-ಗ್ರಾಹಕ ಸಂರಕ್ಷಣಾ ಕಾಯ್ದೆ 2019ರ ಕಲಂ 28(1)ರಡಿ ಕರ್ನಾಟಕ ರಾಜ್ಯದಲ್ಲಿ ನೂತನವಾಗಿ ಸೃಜನೆಯಾಗಿರುವ ವಿಜಯನಗರ ಜಿಲ್ಲೆಯಲ್ಲಿ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸುವ ಕುರಿತು

**ಓದಲಾಗಿದೆ:**-ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಆ/ಆಡಳಿತ/06/2022 ದಿನಾಂಕ: 24.11.2025

******

**ಪ್ರಸ್ತಾವನೆ:-**

ಮೇಲೆ ಓದಲಾದ ಪತ್ರದಲ್ಲಿ ರಿಜಿಸ್ಟ್ರಾರ್ ಹಾಗೂ ಆಡಳಿತಾಧಿಕಾರಿಗಳು, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ, ರಾಜ್ಯ ಸರ್ಕಾರವು ಬಳ್ಳಾರಿ ಜಿಲ್ಲೆಯಲ್ಲಿನ ಕೆಲವು ತಾಲ್ಲೂಕುಗಳನ್ನು ವಿಭಜಿಸಿ ವಿಜಯನಗರ ಜಿಲ್ಲೆಯನ್ನು ಸ್ಥಾಪಿಸಿರುವುದರಿಂದ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1) ರಡಿ ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿಯೂ ಸಹ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸಬೇಕಾಗಿರುವುದರಿಂದ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1)ರಡಿ ವಿಜಯನಗರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸಿ ಅಗತ್ಯ ಹುದ್ದೆಗಳನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿಗಳು, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1)ರಡಿ ವಿಜಯನಗರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಅಗತ್ಯ ಹುದ್ದೆಗಳೊಂದಿಗೆ ಸ್ಥಾಪಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆನಾಸ 79 ಸಲಫ 2023 (1204274)**
**ಬೆಂಗಳೂರು, ದಿನಾಂಕ: 25.05.2026**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರವು ಬಳ್ಳಾರಿ ಜಿಲ್ಲೆಯಲ್ಲಿನ ಕೆಲವು ತಾಲ್ಲೂಕುಗಳನ್ನು ವಿಭಜಿಸಿ ವಿಜಯನಗರ ಜಿಲ್ಲೆಯನ್ನು ಸ್ಥಾಪಿಸಿರುವುದರಿಂದ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1) ರಡಿ ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿಯೂ ಸಹ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸಬೇಕಾಗಿರುವುದರಿಂದ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ರ ಕಲಂ 28(1)ರಡಿ ವಿಜಯನಗರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಸ್ಥಾಪಿಸಿ, ಈ ಕೆಳಕಂಡ ಅಗತ್ಯ ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಹುದ್ದೆಗಳ ವಿವರ | ಆರ್ಥಿಕ ಇಲಾಖೆಯು ಸೃಜಿಸಲು ಸಹಮತಿಸಿದ ಹುದ್ದೆಗಳ ಸಂಖ್ಯೆ | ಷರಾ |
|---|---|---|---|
| 1 | ಅಧ್ಯಕ್ಷರು | 01 | Tenure Post |
| 2 | ಸದಸ್ಯರು | 02 | Tenure Post |
| 3 | ಸಹಾಯಕ ರಿಜಿಸ್ಟ್ರಾರ್ ಹಾಗೂ ಸಹಾಯಕ ಆಡಳಿತಾಧಿಕಾರಿ | 01 | As per C&R |
| 4 | ಶಿರಸ್ತೇದಾರ್ | 01 | As per C&R |

...2

| | | | |
|---|---|---|---|
| 5 | ಶೀಘ್ರಲಿಪಿಗಾರರು | 02 | Out source |
| 6 | ಪ್ರಥಮ ದರ್ಜೆ ಸಹಾಯಕರು | 01 | As per C&R |
| 7 | ದ್ವಿತೀಯ ದರ್ಜೆ ಸಹಾಯಕರು | 01 | As per C&R |
| 8 | ದತ್ತಾಂಶ ನಮೂದು ಸಹಾಯಕರು | 01 | Out source |
| 9 | ಗ್ರೂಪ್-ಡಿ | 03 | Out source |
| | **ಒಟ್ಟು** | 13 | |

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 239 ವೆಚ್ಚ-5 2022 ದಿನಾಂಕ: 16.05.2026 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Shubhaprakash 25/5/26

**(ಶುಭಪ್ರಕಾಶ್ ಬಿ.ಎಸ್)**
ಸರ್ಕಾರದ ಅಧೀನ ಕಾರ್ಯದರ್ಶಿ
(ಆಹಾರ-3 ಮತ್ತು ಸಮನ್ವಯ)
ಆಹಾರ, ನಾಗರೀಕ ಸರಬರಾಜು,
ಗ್ರಾಹಕರ ವ್ಯವಹಾರ ಮತ್ತು
ಕಾನೂನು ಮಾಪನಶಾಸ್ತ್ರ, ಇಲಾಖೆ.

**ಪ್ರತಿಯನ್ನು:-**

1. ಪ್ರಧಾನ ಮಹಾಲೇಖಪಾಲರು (ಎ & ಇ)ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ)ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಇ & ಆರ್.ಎಸ್.ಎ)ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398 ,ಬೆಂಗಳೂರು-560001.
4. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಬಸವ ಭವನ, ಬೆಂಗಳೂರು.
5. ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಬಸವ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳಿಗೆ (ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮೂಲಕ)
7. ಅಧ್ಯಕ್ಷರು, ಎಲ್ಲಾ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಗಳು (ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮೂಲಕ)
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 5 ಮತ್ತು 7), ವಿಧಾನಸೌಧ, ಬೆಂಗಳೂರು.
9. ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಮಾನ್ಯ ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಹಾರ, ನಾಗರೀಕ ಸರಬರಾಜು, ಗ್ರಾಹಕ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ, ಇಲಾಖೆ.
12. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆಹಾರ, ನಾಗರೀಕ ಸರಬರಾಜು, ಗ್ರಾಹಕ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ, ಇಲಾಖೆ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು